ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಗ್ರಾಹಕರ ವೇದಿಕೆಯ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳ ಬಗ್ಗೆ

ಶ್ರೀ ಐವನ್ ಡಿ' ಸೋಜಾ(ನಾಮನಿರ್ದೇಶನ ಹೊಂದಿದವರು):-

1046 (1286) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಗ್ರಾಹಕರ ವೇದಿಕೆಯ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು ಎಷ್ಟು ; (ವಿವರ ನೀಡುವುದು)

(ಆ) ಗ್ರಾಹಕರ ವೇದಿಕೆ ಅಧ್ಯಕ್ಷ ಮತ್ತು ಸದಸ್ಯರುಗಳ ಹುದ್ದೆಗಳು ಖಾಲಿ ಇವೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಇ) ಗ್ರಾಹಕರ ರಕ್ಷಣೆಗಾಗಿ ಹೆಚ್ಚುವರಿ ತ್ವರಿತ ನ್ಯಾಯಾಲಯಗಳನ್ನು ಸ್ಥಾಪಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಈ ಬಗ್ಗೆ ವಿವರ ನೀಡುವುದು ;

(ಈ) ಎಷ್ಟು ನಕಲಿ ವಸ್ತುಗಳ ಮಾರಾಟದ ಬಗ್ಗೆ ಕೇಸು ದಾಖಲಾಗಿವೆ ; ಗ್ರಾಹಕರಿಗೆ ಮೋಸ ಮಾಡಿದ ಬಗ್ಗೆ ಎಷ್ಟು ಪ್ರಕರಣಗಳು ದಾಖಲಾಗಿವೆ; ಎಷ್ಟು ಪ್ರಕರಣಗಳಲ್ಲಿ ಶಿಕ್ಷೆ ವಿಧಿಸಲಾಗಿದೆ ? (ವಿವರ ನೀಡುವುದು)